# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್. ರಸ್ತೆ, ತುಮಕೂರು

ಸಂಖ್ಯೆ: ತು.ವಿ: NTFN :2025-26/ ದಿನಾಂಕ: 28.11.2025

: ಸುತ್ತೋಲೆ :

ವಿಷಯ: ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ವಿದ್ಯಾರ್ಥಿಗಳ ಮಾನಸಿಕ ಆರೋಗ್ಯ ಮತ್ತು ಆತ್ಮಹತ್ಯೆ ತಡೆಗಟ್ಟುವಿಕೆ ಕುರಿತಾದ ಸರಣಿ ಸಮೀಕ್ಷೆಯಲ್ಲಿ ಪಾಲ್ಗೊಳ್ಳುವ ಕುರಿತು

ಉಲ್ಲೇಖ: (1) ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 415 ಯುಆರ್‌ಸಿ 2025 ದಿನಾಂಕ: 26.08.2025
(2) ವಿ.ವಿ. ಕಚೇರಿ ಆದೇಶ ಸಂಖ್ಯೆ: ತುವಿ: ಸಿಬ್ಬಂದಿ-2419/ 2022-26/ 1768 ದಿನಾಂಕ: 02.09.2025
(3) ದಿನಾಂಕ: 27.11.2025 ರಂದು ಉನ್ನತ ಶಿಕ್ಷಣ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳ ಅಧ್ಯಕ್ಷತೆ ಹಾಗೂ ಕಾಲೇಜು ಶಿಕ್ಷಣ ಇಲಾಖೆಯ ಆಯುಕ್ತರ ಉಪಸ್ಥಿತಿಯಲ್ಲಿ ಜರುಗಿದ ಸಭೆಯ ನಿರ್ಣಯ

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸರ್ಕಾರದ ಸುತ್ತೋಲೆಯನ್ವಯ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ವಿದ್ಯಾರ್ಥಿಗಳ ಮಾನಸಿಕ ಆರೋಗ್ಯ ಮತ್ತು ಆತ್ಮಹತ್ಯೆ ತಡೆಗಟ್ಟುವಿಕೆ ಕುರಿತು, ಭಾರತದ ಗೌರವಾನ್ವಿತ ಸರ್ವೋಚ್ಛ ನ್ಯಾಯಾಲಯದಿಂದ ರಚಿಸಲ್ಪಟ್ಟ ರಾಷ್ಟ್ರೀಯ ಕಾರ್ಯಪಡೆಯುವ ಪಾಲುದಾರರಿಂದ ನಿರ್ಣಾಯಕ ಸಲಹೆಗಳನ್ನು ಸಂಗ್ರಹಿಸಲು ತನ್ನ ಅಧಿಕೃತ ವೆಬ್‌ಸೈಟ್ https://ntf.education.gov.in ಮೂಲಕ ಸಮೀಕ್ಷೆಯನ್ನು ಕೈಗೊಂಡಿದ್ದು, ಸದರಿ ಸಮೀಕ್ಷೆಯಲ್ಲಿ ಕಡ್ಡಾಯವಾಗಿ ಪಾಲ್ಗೊಳ್ಳುವಂತೆ ಸರ್ಕಾರವು ನಿರ್ದೇಶಿಸಿರುವ ಹಿನ್ನೆಲೆಯಲ್ಲಿ ದಿನಾಂಕ : 27.11.2025 ರಂದು ಉನ್ನತ ಶಿಕ್ಷಣ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳ ಅಧ್ಯಕ್ಷತೆ ಹಾಗೂ ಕಾಲೇಜು ಶಿಕ್ಷಣ ಇಲಾಖೆಯ ಆಯುಕ್ತರ ಉಪಸ್ಥಿತಿಯಲ್ಲಿ ಜರುಗಿದ ಸಭೆಯ ನಿರ್ಣಯದಂತೆ ದಿನಾಂಕ: 10.12.2025 ರೊಳಗೆ ಕೆಳಕಂಡಂತೆ ಆನ್‌ಲೈನ್ ಸರ್ವೆಯನ್ನು ಕಡ್ಡಾಯವಾಗಿ ಪೂರ್ಣಗೊಳಿಸಲು ಈ ಮೂಲಕ ಸೂಚಿಸಲಾಗಿದೆ.

| | | |
|---|---|---|
| ಆನ್‌ಲೈನ್ ಸರ್ವೆ ಪೂರ್ಣಗೊಳಿಸುವ ಅಂತಿಮ ದಿನಾಂಕ | : | 10.12.2025 |
| ಆನ್‌ಲೈನ್ ಸರ್ವೆ ಲಿಂಕ್ | : | https://ntf.education.gov.in |
| ಸ್ನಾತಕೋತ್ತರ ವಿಭಾಗಗಳ ಆನ್‌ಲೈನ್ ಸರ್ವೆ | : | ಬೋಧಕರು, ವಿದ್ಯಾರ್ಥಿಗಳು, ವಿದ್ಯಾರ್ಥಿಗಳ ಪೋಷಕರು |
| ಘಟಕ ಮತ್ತು ಸಂಯೋಜಿತ ಕಾಲೇಜುಗಳ ಆನ್‌ಲೈನ್ ಸರ್ವೆ | : | Instituitonal ಸರ್ವೆ, ಬೋಧಕರು, ವಿದ್ಯಾರ್ಥಿಗಳು, ವಿದ್ಯಾರ್ಥಿಗಳ ಪೋಷಕರು |

ಮೇಲ್ಕಂಡ ಸರಣಿ ಸಮೀಕ್ಷೆಯಲ್ಲಿ ಪಾಲ್ಗೊಂಡು ಪೂರ್ಣಗೊಳಿಸಿದ ವಿವರ/ ಮಾಹಿತಿಯನ್ನು ಕಡ್ಡಾಯವಾಗಿ ನೋಡಲ್ ಅಧಿಕಾರಿಗಳಿಗೆ 11.12.2025 ರೊಳಗೆ ಸಲ್ಲಿಸಲು ಈ ಮೂಲಕ ಸೂಚಿಸಲಾಗಿದೆ.

ವಿ.ಸೂ: ಸದರಿ ವಿಷಯವನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿರುವುದರಿಂದ, ಮುಂದಿನ ಆಗು-ಹೋಗುಗಳಿಗೆ ಸಂಬಂಧಪಟ್ಟವರೇ ನೇರ ಹೊಣೆಗಾರರಾಗಿರುತ್ತಾರೆ.

ಮಾನ್ಯ ಕುಲಪತಿಗಳ ಆದೇಶದ ಮೇರೆಗೆ


ಡಾ. ಅರುಣ್ ಕುಮಾರ್ ಡಿ.ಟಿ.
ನೋಡಲ್ ಅಧಿಕಾರಿಗಳು, NTF Online Survey
ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
ಮೊ: 7899361918
ಈ-ಮೇಲ್: nirmaldb@gmail.com


ಇವರಿಗೆ

1. ಅಧ್ಯಕ್ಷರು/ ಸಂಯೋಜಕರು, ಎಲ್ಲಾ ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನಾ ವಿಭಾಗಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಅಧ್ಯಕ್ಷರು/ ಸಂಯೋಜಕರು, ಎಲ್ಲಾ ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನಾ ವಿಭಾಗಗಳು, ತುಮಕೂರು ವಿಶ್ವವಿದ್ಯಾನಿಲಯ ಜ್ಞಾನಸಿರಿ ಕ್ಯಾಂಪಸ್, ಬಿದರಕಟ್ಟೆ, ತುಮಕೂರು.
3. ಪ್ರಾಂಶುಪಾಲರು, ಘಟಕ/ ಸಂಯೋಜಿತ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು – ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು ಹಾಗೂ ಈ-ಮೇಲ್ ಮೂಲಕ ಕಳುಹಿಸುವುದು.

ಪ್ರತಿ:

1. ಮಾನ್ಯ ಕುಲಪತಿಗಳ ಆಪ್ತಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಕಚೇರಿ ಪ್ರತಿ